ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ ಜಿಲ್ಲೆ, ದಾವಣಗೆರೆ.

## ಜಿಲ್ಲಾ ನಗರಾಭಿವೃದ್ಧಿ ಕೋಶ

**ನಂ.ಜಿ.ನ.ಕೋ.ದಾ(2)/ಸಿಆರ್/804/2025-26** **ದಿನಾಂಕ:11-03-2026**

## ~: ಅಧಿಸೂಚನೆ :~

ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ನಡವಳಿ ಆದೇಶ ಸಂಖ್ಯೆ 1971724/DMA/EST2/GRPD/54/2025, ದಿನಾಂಕ:13.01.2026 ರಲ್ಲಿ ರಾಜ್ಯದ ನಗರಸಭೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 176 ಜಿಇಎಲ್ 2022 (ಭಾಗ-2) (ಇ), ದಿನಾಂಕ:09.03.2023 ಮತ್ತು 29.03.2023 ರನ್ವಯ 132 ಸಂಖ್ಯಾತಿರಿಕ್ತ (Supernumerary) ಹುದ್ದೆಗಳನ್ನು ಸೃಜಿಸಲಾಗಿದ್ದು, ಸದರಿ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಷರತ್ತುಗೊಳಪಟ್ಟು ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.

ಪೌರಸೇವಾ ವೃಂದದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪೌರಕಾರ್ಮಿಕರ ಹುದ್ದೆಗಳನ್ನು ನಗರಸಭೆಗಳಿಗೆ ಶೇ. 50 ರಷ್ಟು ನೇರನೇಮಕಾತಿ ಹಾಗೂ ಶೇ. 50 ರಷ್ಟು ನೇರಪಾವತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಆದ್ದರಿಂದ, ಉಲ್ಲೇಖ (1) ಹಾಗೂ (2) ಸರ್ಕಾರದ ಆದೇಶಗಳ 132 ಸಂಖ್ಯಾತಿರಿಕ್ತ (supernumerary) ಪೌರಕಾರ್ಮಿಕರ ಹುದ್ದೆಗಳಿಗೆ ಷರತ್ತು ವಿಧಿಸಿ ನೇಮಕಾತಿಗೆ ಅನುಮೋದನೆ ನೀಡಲಾಗಿರುವಂತೆ, ಸದರಿ 132 ಸಂಖ್ಯಾತಿರಿಕ್ತ ಪೌರಕಾರ್ಮಿಕರ ಹುದ್ದೆಗಳನ್ನು ರಾಜ್ಯದ ನಗರಸಭೆಗಳಿಗೆ ಹಂಚಿಕೆ ಮಾಡಲು ತೀರ್ಮಾನಿಸಲಾಗಿದ್ದು, ಅದರಲ್ಲಿ ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಹರಿಹರ ನಗರಸಭೆಗೆ 04 ಪೌರಕಾರ್ಮಿಕರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಹಂಚಿಕೆ ಮಾಡಲಾಗಿರುತ್ತದೆ. (ಮೀಸಲಾತಿವಾರು ಹುದ್ದೆಗಳ ವಿವರ ಈ ಮುಂದಿನಂತೆ ಇರುತ್ತದೆ)

ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ನಡವಳಿ ಆದೇಶ ಸಂಖ್ಯೆ 1971724/DMA/EST2/GRPD/54/2025, ದಿನಾಂಕ:13.01.2026ರ ರೀತ್ಯಾ ಮೀಸಲಿರಿಸಿದ ಒಳಮೀಸಲಾತಿಯನ್ನು ಅಳವಡಿಸಿಕೊಂಡು ರೋಸ್ಟರ್ ಬಿಂದುವಿನ ಅನುಬಂಧದಂತೆ ವರ್ಗವಾರು ವರ್ಗೀಕರಿಸಿಕೊಂಡು, ಸರ್ಕಾರದ ವಿಶೇಷ ನೇಮಕಾತಿ ನಿಯಮಗಳ ರೀತ್ಯಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ನೇರಪಾವತಿ/ದಿನಗೂಲಿ ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳು ಮಾತ್ರ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
2. ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರಿರುವ ಮೀಸಲಾತಿ / ಎಲ್ಲಾ ಸಂಬಂಧಿತ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು.
3. ಅರ್ಜಿ ನಮೂನೆ ಪಡೆಯುವ ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ ಹಾಗೂ ವಿಳಾಸ:

| ವಿವರ | ದಿನಾಂಕ | ಅರ್ಜಿ ನಮೂನೆ ಪಡೆಯುವ ಹಾಗೂ ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸುವ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 11-03-2026 | ಹರಿಹರ ನಗರಸಭೆ. (ಕಛೇರಿ ವೇಳೆಯಲ್ಲಿ) |
| ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 10-04-2026 | |

| ಕ್ರ.ಸಂ. | ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ | ನೇರ ನೇಮಕಾತಿಗೆ ಪರಿಗಣಿಸಬೇಕಾದ ಹುದ್ದೆಗಳ ಸಂಖ್ಯೆ | | ಅರ್ಜಿ ಸಲ್ಲಿಸಲು ಅರ್ಹತೆ |
|---|---|---|---|---|
| 1 | ಪೌರ ಕಾರ್ಮಿಕ 27000-46675 | ಹರಿಹರ ನಗರಸಭೆ | 04 | 1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2. ಕನ್ನಡ ಮಾತನಾಡಲು ಗೊತ್ತಿರಬೇಕು.<br>3. ಪ್ರಸ್ತುತ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಸದರಿ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. |
| **ಒಟ್ಟು** | | | **04** | |

4. **ಹುದ್ದೆಗಳ ವರ್ಗೀಕರಣ:**

**ಹರಿಹರ ನಗರಸಭೆ :**

| ಒಟ್ಟು ಹುದ್ದೆಗಳ ಸಂಖ್ಯೆ:06 | | | | | | | | | |
|---|---|---|---|---|---|---|---|---|---|
| ಮೀಸಲಾತಿ | ಸಾಮಾನ್ಯ | ಮಹಿಳೆ | ಗ್ರಾಮೀಣ | ಮಾ.ಸೈ | ಯೋ.ನಿ | ಕ.ಮಾ.ಅ | ಅಂ.ವಿ | ತೃ.ಲಿಂ | ಒಟ್ಟು |
| ಪ.ಜಾ(ಪ್ರ-ಎ) | - | - | - | - | - | - | 01 | - | **01** |
| ಪ.ಜಾ(ಪ್ರ-ಬಿ) | - | - | - | - | - | - | - | - | **00** |
| ಪ.ಜಾ(ಪ್ರ-ಸಿ) | - | - | - | - | - | - | - | - | **00** |
| ಪ.ಪಂ | - | - | - | - | - | - | - | - | **00** |
| ಪ್ರ-1 | - | - | - | - | - | - | - | - | **00** |
| ಪ್ರ-2 (ಎ) | - | - | 01 | - | - | - | - | - | **01** |
| ಪ್ರ-2 (ಬಿ) | - | - | - | - | - | - | - | - | **00** |
| ಪ್ರ-3 (ಎ) | - | - | - | - | - | - | - | - | **00** |
| ಪ್ರ-3 (ಬಿ) | - | - | - | - | - | - | - | - | **00** |
| ಸಾ.ಅ | - | - | 01 | 01 | - | - | - | - | **02** |
| ಒಟ್ಟು | **00** | **00** | **02** | **01** | **00** | **00** | **01** | **00** | **04** |

5. **ಷರತ್ತುಗಳು:**

1. ರಾಜ್ಯದ ನಗರಸಭೆಗಳಲ್ಲಿ ಹಾಲಿ ನೇರಪಾವತಿ/ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದ ಮೇಲೆ 02 ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸಿರುವ ಪೌರಕಾರ್ಮಿಕರಿಗೆ ಆದ್ಯತೆ ನೀಡಲಾಗುವುದು.
2. ರಾಜ್ಯದ ನಗರಸಭೆಗಳಲ್ಲಿ ಹಾಲಿ ನೇರಪಾವತಿ ಕ್ಷೇಮಾಭಿವೃದ್ಧಿ/ದಿನಗೂಲಿ ಆಧಾರದ ಮೇಲೆ 02 ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸಿರುವ ಪೌರಕಾರ್ಮಿಕರು 02 ವರ್ಷಗಳಿಗೆ ಮೇಲ್ಪಟ್ಟು ನಗರಸಭೆಯಲ್ಲಿ ವೇತನ ಪಡೆದ ದಾಖಲಾತಿಗಳನ್ನು ನೇಮಕಾತಿಯಲ್ಲಿ ಆದ್ಯತೆಗೆ ಪರಿಗಣಿಸತಕದ್ದು.
3. ಆದ್ಯತೆಯನ್ನು ನೀಡುವಲ್ಲಿ 02 ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ವಯಸ್ಸಿನಲ್ಲಿ ಹಿರಿಯರಾದವರನ್ನು ಮೇಲೆ ಪರಿಗಣಿಸಬೇಕು ಹಾಗೂ ಹುಟ್ಟಿದ ದಿನಾಂಕ ಮತ್ತು ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಪರಿಗಣಿಸಲಾಗುವುದು.
4. ಸದರಿ ಪೌರಕಾರ್ಮಿಕರ ವೇತನವನ್ನು ಎಸ್ ಎಫ್ ಸಿ ಅನುದಾನದಡಿ ರಾಜ್ಯ ಆರ್ಥಿಕ ಆಯೋಗದ ಶಿಫಾರಸ್ಸಿನಂತೆ ಇರುವ ಅಧಿಕಾರ ಹಂಚಿಕೆಗೆ ಸೀಮಿತಗೊಳಿಸಿ, ಇದಕ್ಕೆ ತಗಲುವ ಹೆಚ್ಚುವರಿ ಆರ್ಥಿಕ ಹೊರೆಯನ್ನು ಸಂಬಂಧಪಟ್ಟ ನಗರಸಭೆಯ ಸ್ವಂತ ನಿಧಿಯಿಂದ ಭರಿಸುವ ಷರತ್ತಿಗೊಳಪಡಿಸಲಾಗಿದೆ.
5. ಸದರಿ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ನೇರ ಪಾವತಿಯಡಿ ಮಂಜೂರಾದ ಹುದ್ದೆಗಳು ತಂತಾನೇ ರದ್ದಾಗುತ್ತವೆ.
6. ಪ್ರಸ್ತಾಪಿತ ಪೌರಕಾರ್ಮಿಕರ ಖಾಯಂಮಾತಿಯು ಗುತ್ತಿಗೆ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಇತರೆ ವರ್ಗಗಳ ನೌಕರರ/ಸಿಬ್ಬಂದಿಗೆ ಪೂರ್ವನಿದರ್ಶನವಾಗತಕ್ಕದಲ್ಲ.
7. ಹರಿಹರ ನಗರಸಭೆಗೆ ಸಂಖ್ಯಾತಿರಿಕ್ತವಾಗಿ ಸೃಜಿಸಲಾದ 04 ಹುದ್ದೆಗಳಿಗೆ ನೇಮಕಾತಿ ಹೊಂದಿದ ನಂತರ, ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ನಿವೃತ್ತಿ/ನಿಧನ/ವಜಾಗೊಳಿಸುವಿಕೆ/ಇತರೆ ಕಾರಣಗಳಿಂದ ತೆರವಾದ ದಿನಾಂಕದಿಂದ ಸದರಿ ಹುದ್ದೆಗಳು ರದ್ದಾಗುತ್ತವೆ.

6. **ವಯೋಮಿತಿ:**

ರಾಜ್ಯದ ನಗರಸಭೆಗಳಲ್ಲಿ ನೇರಪಾವತಿ / ದಿನಗೂಲಿ ಕ್ಷೇಮಾಭಿವೃದ್ಧಿ ಅಧಿನಿಯಮ/ಸಮಾನ ಕೆಲಸಕ್ಕೆ ಸಮಾನ ವೇತನದಡಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಒಟ್ಟು 132 (ಹರಿಹರ-04) ಸಂಖ್ಯಾತಿರಿಕ್ತ ಪೌರಕಾರ್ಮಿಕರ (Supernumerary) ಹುದ್ದೆಗಳನ್ನು ಸೃಜಿಸಿದ್ದು, ಈ ಹುದ್ದೆಗಳ ನೇಮಕಾತಿಗಾಗಿ ಇರುವ ವಯೋಮಿತಿಯನ್ನು ಸಡಿಲಿಸಿ ನೇಮಕಾತಿಗಾಗಿ ಗರಿಷ್ಟ ವಯೋಮಿತಿಯನ್ನು 55 (ಒಂದು ಬಾರಿಗೆ) ವರ್ಷಕ್ಕೆ ಹೆಚ್ಚಿಸಲಾಗಿದೆ.

ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಸದರಿ ಅಧಿಸೂಚನೆ ಜಾರಿಗೆ ಬಂದ ದಿನಾಂಕಕ್ಕೆ ಗರಿಷ್ಠ ವಯೋಮಿತಿ 55 ವರ್ಷಗಳನ್ನು ಮೀರತಕ್ಕದ್ದಲ್ಲ.

7. **ನಿಗಧಿಪಡಿಸಿದ ಅರ್ಹತೆಗಳು:**

- ಅಭ್ಯರ್ಥಿಯು ಭಾರತೀಯ ನಾಗರಿಕನಾಗಿರತಕ್ಕದ್ದು.

- ಅರ್ಜಿಗಳನ್ನು ನೇರವಾಗಿ ಹರಿಹರ ನಗರಸಭೆಯಲ್ಲಿ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ಅರ್ಜಿಗಳನ್ನು ಇ-ಮೇಲ್ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ, ನಿಗಧಿತ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು ಅರ್ಜಿಯೊಂದಿಗೆ ಸಲ್ಲಿಸುವ ಎಲ್ಲಾ ದಾಖಲಾತಿಗಳಿಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಮುಖ್ಯಸ್ಥರು ದೃಢಿಕರಿಸಬೇಕು.
- ಜನ್ಮ ದಿನಾಂಕದ ದೃಢಿಕರಣಕ್ಕಾಗಿ ಶೈಕ್ಷಣಿಕ ದಾಖಲಾತಿಗಳು/ಆಧಾರ್‌ಕಾರ್ಡ್/ಪಡಿತರ ಚೀಟಿ/ಮತದಾರರ ಗುರುತಿನ ಚೀಟಿ ದಾಖಲೆಗಳನ್ನು ಸಲ್ಲಿಸುವುದು.
- ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಾಂಕ:07-08-2017ರ ಪೂರ್ವದಲ್ಲಿ ನೇಮಕಾತಿ ಹೊಂದಿ ಪ್ರಸ್ತುತ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ನೇರಪಾವತಿಯಡಿ ಪೌರಕಾರ್ಮಿಕ ಹುದ್ದೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.
- 2 ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಪರಿಗಣಿಸಲಾಗುವುದು.
- ಕಡಿಮೆ ವರ್ಷ ಸೇವೆ ಸಲ್ಲಿಸಿರುವುದಕ್ಕಿಂತ, ಹೆಚ್ಚು ವರ್ಷ ಸೇವೆ ಸಲ್ಲಿಸಿದವರನ್ನು ಪರಿಗಣಿಸಲಾಗುವುದು.
- ನೇರಪಾವತಿಯಡಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರುಗಳಿಗೆ ಸಂಬಂಧಿಸಿದಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್) ಪರಿಗಣಿಸಲಾಗುವುದು.
- ನೇರಪಾವತಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರುಗಳ ನೇಮಕಾತಿಗೆ, ನಗರ ಸ್ಥಳೀಯ ಸಂಸ್ಥೆಗಳಿಂದ 2 ವರ್ಷಗಳ ಮೇಲ್ಪಟ್ಟು ವೇತನ ಪಡೆದ ದಾಖಲಾತಿಗಳನ್ನು ಪರಿಗಣಿಸಲಾಗುವುದು.
- ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಇದ್ದಲ್ಲಿ, ಸದರಿ ಅಭ್ಯರ್ಥಿಯ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಮತ್ತೊಬ್ಬ ವ್ಯಕ್ತಿಯನ್ನು ಪರಿಗಣಿಸಲಾಗುವುದು.
- ಆಯ್ಕೆ ಮಾಡಲಾದ ಅಭ್ಯರ್ಥಿಗಳ ಪಟ್ಟಿಯು ಗುರುತಿಸಲಾದ ಖಾಲಿ ಹುದ್ದೆಗಳು ಭರ್ತಿಯಾಗುವವರೆಗೆ ಅಥವಾ ಆಯ್ಕೆ ಪಟ್ಟಿಯು ಪ್ರಕಟವಾದ 1 ವರ್ಷದ ಅವಧಿಯವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ.
- ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

**8. ವಿಶೇಷ ಸೂಚನೆಗಳು :-**

- ಅರ್ಜಿ ನಮೂನೆಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳ ಕಛೇರಿಯಿಂದ ಪಡೆದು, ಅರ್ಜಿಯಲ್ಲಿ ಕೋರಿರುವ ಎಲ್ಲಾ ದಾಖಲೆಗಳನ್ನು ದೃಢೀಕರಿಸಿ ಸಲ್ಲಿಸುವುದು.
- ಅರ್ಜಿಯ ಜೊತೆಯಲ್ಲಿ ಹೆಚ್ಚುವರಿಯಾಗಿ 03 ಪಾಸ್ ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಲಗತ್ತಿಸುವುದು.
- ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರ ಹೆಸರಿನಲ್ಲಿ ಪೌರಾಯುಕ್ತರು, ನಗರಸಭೆ, ಹರಿಹರ ರವರ ಮೂಲಕ ಸಲ್ಲಿಸುವುದು.
- ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ದಿನಾಂಕವು ಸಾರ್ವಜನಿಕ ರಜೆ ಎಂದು ಘೋಷಿಸಿದಲ್ಲಿ, ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.
- ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

- ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಯು ಸಲ್ಲಿಸಿರುವ ದಾಖಲೆಗಳು ತಪ್ಪು ಅಥವಾ ಸುಳ್ಳು ಎಂದು ಕಂಡು ಬಂದಲ್ಲಿ ನೇಮಕಾತಿ ಆದೇಶ ರದ್ದುಪಡಿಸುವುದಲ್ಲದೇ, ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಪಡಿಸುವ ಅಥವಾ ಹೆಚ್ಚುವರಿ ಷರತ್ತುಗಳನ್ನು ವಿಧಿಸುವ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ ರವರಿಗೆ ಕಾಯ್ದಿರಿಸಿಕೊಂಡಿರುತ್ತದೆ.
- ಈ ಅಧಿಸೂಚನೆಯು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.

**9. ಅರ್ಜಿ ಸಲ್ಲಿಸುವ ವಿಧಾನ:-**

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗದಿತ ಅರ್ಜಿ ನಮೂನೆಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ / ಹೆಬ್ಬಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ ಹೆಬ್ಬಟ್ಟಿನ ಗುರುತು ಮಾಡುವುದು. ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಪೌರಾಯುಕ್ತರು ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ (ವಿಶೇಷ) ಆಯ್ಕೆ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ ರವರ ಹೆಸರಿಗೆ, ಹರಿಹರ ನಗರಸಭೆ ಪೌರಾಯುಕ್ತರ ಮುಖಾಂತರ ದಿನಾಂಕ: 10-04-2026 ರ ಒಳಗಾಗಿ ಕಛೇರಿ ವೇಳೆಯಲ್ಲಿ ಅರ್ಜಿಯನ್ನು ಸಲ್ಲಿಸುವುದು. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

<u>ಯಥಾ ಪ್ರತಿಗಳನ್ನು:</u>

1. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಾವಣಗೆರೆ ರವರಿಗೆ ಸಲ್ಲಿಸುತ್ತಾ ಸದರಿ ಅಧಿಸೂಚನೆಯನ್ನು ರಾಜ್ಯ ಮಟ್ಟದ 02 ಕನ್ನಡ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚುರಪಡಿಸಲು ಕೋರಿದೆ.
2. ಪೌರಾಯುಕ್ತರು, ನಗರಸಭೆ, ಹರಿಹರ ರವರಿಗೆ ಅಗತ್ಯ ಕ್ರಮಕ್ಕಾಗಿ ಹಾಗೂ ತಮ್ಮ ಕಛೇರಿ ಸೂಚನಾ ಫಲಕಗಳಲ್ಲಿ ಹಾಗೂ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಛೇರಿ ಕಡತಕ್ಕೆ.